**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಇಂದು, ನಾಡಿನೆಲ್ಲೆಡೆ** ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಹಾಗೂ ಅಕ್ಷಯ ತೃತೀಯ ಪರ್ವವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಬಸವ ಜಯಂತಿ ದಿನದಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಗಣ್ಯರು ನಾಡಿನ ಜನತೆಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ತಮ್ಮ ಎಕ್ಸ್ ಖಾತೆಯ ಮೂಲಕ ಶುಭಾಶಯ ಸಂದೇಶವನ್ನು ತಿಳಿಸಿದ್ದಾರೆ. 'ಜಗದ್ಗುರು ಬಸವೇಶ್ವರರ ಆಳವಾದ ಜ್ಞಾನವನ್ನು ನಾವು ಸ್ಮರಿಸುತ್ತೇವೆ. ಸಮಾಜಕ್ಕಾಗಿ ಅವರ ದೃಷ್ಟಿಕೋನ ಮತ್ತು ವಂಚಿತರನ್ನು ಮೇಲೆತ್ತಲು ಅವರ ಅವಿಶ್ರಾಂತ ಪ್ರಯತ್ನಗಳು ನಮಗೆ ಸದಾ ಮಾರ್ಗದರ್ಶನ ಹಾಗೂ ಸ್ಫೂರ್ತಿ ನೀಡುತ್ತವೆ' ಎಂದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಸಂದೇಶದಲ್ಲಿ, 'ಬಸವಣ್ಣನವರು ನೀಡಿದ್ದ ದಯೆಯೇ ಧರ್ಮದ ಮೂಲವಯ್ಯಾ' ಎಂಬ ಶಾಂತಿ, ಸೌಹಾರ್ದತೆಯ ಮಂತ್ರವನ್ನು ಎಲ್ಲರೂ ಮನನ ಮಾಡಿಕೊಳ್ಳಬೇಕಿದೆ, ಅಂತಹ ಅರಿವಿನ ಬೆಳಕನ್ನು ಎಲ್ಲರಲ್ಲೂ ಬಸವಣ್ಣ ಮೂಡಿಸಲಿ ಎಂದು ಹಾರೈಸಿದ್ದಾರೆ.

<><><>

**ವಚನಗಳ ಮೂಲಕ ಕಾಯಕ** ತತ್ವದ ಮಹತ್ವವನ್ನು ಸಾರಿದವರು ಜಗಜ್ಯೋತಿ ಬಸವಣ್ಣನವರು, ಅವರ ಸಾಮಾಜಿಕ ಹಿತದೃಷ್ಠಿಯ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಗದಗ ಜಿಲ್ಲೆ, ಕಪತ್ತಗುಡ್ಡ, ನಂದಿವೇರಿ ಸಂಸ್ಥಾನ ಮಠದ ಶ್ರೀ ಶಿವಕುಮಾರ ಸ್ವಾಮೀಜಿಯವರು...

**ಧ್ವನಿ: ಶಿವಕುಮಾರ ಸ್ವಾಮೀಜಿ 39 ಸೆಕೆಂದುಗಳು.**

<><><>

**ಧಾರವಾಡದ ಕರ್ನಾಟಕ** ವಿದ್ಯಾವರ್ಧಕ ಸಂಘದಲ್ಲಿ ಆಯೋಜಿತ ಬಸವ ಜಯಂತಿ ಕಾರ್ಯಕ್ರಮದಲ್ಲಿ, ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಅವರು, ಶ್ರೀ ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ಸಲ್ಲಿಸಿದರು.

<><><>

**ಪ್ರಜಾಪ್ರಭುತ್ವದ ಸಂಸ್ಥೆಗಳಾದ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗ** ಸಮನ್ವಯತೆಯಿಂದ ಕೆಲಸ ಮಾಡಬೇಕು. ಹಾಗಾದಾಗ ಮಾತ್ರ ಸಮಾಜದ ಸಮಸ್ಯೆ ಬಗೆಹರಿಸಲು ಸಾಧ್ಯ. ಈ ನಿಟ್ಟಿನಲ್ಲಿ ಕಾನೂನು ಬಲ್ಲ ವಕೀಲರ ಜವಾಬ್ದಾರಿ ಬಹಳಷ್ಟಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಂಗಳೂರು ವಕೀಲರ ಸಂಘದ ವಾರ್ಷಿಕ ದಿನಾಚರಣೆ ಕಾರ್ಯಕ್ರಮ ಹಾಗೂ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಸರ್ವೋಚ್ಚ ನ್ಯಾಯಾಲಯದ ಪೀಠ ಸ್ಥಾಪನೆಗೆ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.

<><><>

**ಪರಿಶಿ ್ಟ ಜಾತಿಯ ಒಳ ಮೀಸಲಾತಿ ಜಾರಿ ಕುರಿತಂತೆ ಮೇ 5 ರಿಂದ 21 ವರೆಗೆ ಶಿವಮೊಗ್ಗ** ಜಿಲ್ಲೆಯಲ್ಲಿ ಗಣತಿದಾರರು ಮನೆ-ಮನೆಗೆ ತೆರಳಿ ಸಮೀಕ್ಷೆ ಕಾರ್ಯ ನಡೆಸಲಿದ್ದು, ಈ ಸಮೀಕ್ಷೆಯಲ್ಲಿ ಜಿಲ್ಲೆಯ ಪರಿಶಿ ್ಟ ಜಾತಿಯ ಸಮುದಾಯದವರು ತಮ್ಮ ಮೂಲಜಾತಿಯನ್ನು ತಿಳಿಸಬಹುದಾಗಿದ್ದು, ಸಮೀಕ್ಷಾ ಕಾರ್ಯಕ್ಕೆ ಎಲ್ಲರೂ ಸಹಕರಿಸಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಕೋರಿದ್ದಾರೆ.

<><><>

**ಬೇಸಿಗೆ ಅವಧಿಯಲ್ಲಿ ಗ್ರಾಮೀಣ ಭಾಗದ ಜನರು ಉದ್ಯೋಗ ಅರಸಿಕೊಂಡು ವಲಸೆ** ಹೋಗುವುದನ್ನು ತಪ್ಪಿಸಲು, ಮೇ 1 ರಿಂದ ಒಂದು ತಿಂಗಳ ಕಾಲ ಮನರೇಗಾ ಯೋಜನೆಯಡಿ 'ದುಡಿಯೋಣ ಬಾ' ಅಭಿಯಾನವನ್ನು ಆಯೋಜಿಸಲಾಗಿದೆ.

<><><>

**ಬೆಂಗಳೂರು ಆಕಾಶವಾಣಿ ಕೇಂದ್ರದಲ್ಲಿ** ಸೇವೆ ಸಲ್ಲಿಸುತ್ತಿದ್ದ ಮೂರು ಜನ ಉದ್ಯೋಗಿಗಳು ಇಂದು ಸೇವೆಯಿಂದ ನಿವೃತ್ತರಾಗುತ್ತಿದ್ದಾರೆ. 33 ವರ್ಷಗಳ ಕಾಲ ಉದ್ಘೋಷಕಿಯಾಗಿ ಸೇವೆ ಸಲ್ಲಿಸಿದ ಎಂ.ಎಸ್ ಅನುಪಮ, ಶ್ರೀನಗರ ಹಾಗೂ ಬೆಂಗಳೂರಿನಲ್ಲಿ ಉದ್ಘೋಷಕಿಯಾಗಿ ಸೇವೆ ಸಲ್ಲಿಸಿರುವ ಜಮ್ಮು ಕಾಶ್ಮೀರದ ಹುಮೈರ ತಬಸುಂ ಹಾಗೂ ಅಭಿಯಾಂತ್ರಿಕ ವಿಭಾಗದಲ್ಲಿ ಸಹಾಯಕರಾಗಿ ಸೇವೆ ಸಲ್ಲಿಸಿರುವ ಎಂ. ಮಾಧವ ಅವರಿಗೆ, ಕೇಂದ್ರದ ಸಿಬ್ಬಂದಿ ವರ್ಗ ಶುಭಾಶಯಗಳನ್ನು ತಿಳಿಸಿದ್ದು, ಬೀಳ್ಕೊಡುತ್ತಿದೆ.

<><><>

**ರಾಮನಗರ ಜಿಲ್ಲೆ, ಕನಕಪುರ ತಾಲೂಕಿನ** ರಾಗಿ ಖರೀದಿ ಕೇಂದ್ರದಿಂದ ನೆರೆಯ ತಮಿಳುನಾಡಿಗೆ ರಾಗಿಯ ಅಕ್ರಮ ಸರಬರಾಜು ಆಗದಂತೆ ಕ್ರಮ ವಹಿಸಲು, ತಾಲೂಕಿನ ಗಡಿಭಾಗದ ಕೋಳಗೊಂಡನಹಳ್ಳಿ ಹಾಗೂ ಎಪಿಎಂಸಿ ಮಾರುಕಟ್ಟೆ ಮುಂಭಾಗ ತಪಾಸಣಾ ಕೇಂದ್ರವನ್ನು ತೆರೆದು, ಅಧಿಕಾರಿ ಹಾಗೂ ಸಿಬ್ಬಂದಿ ನಿಯೋಜಿಸಿ ಜಿಲ್ಲಾಧಿಕಾರಿ ಯಶವಂತ್.ವಿ ಗುರುಕರ ಅವರು ಆದೇಶ ಹೊರಡಿಸಿದ್ದಾರೆ.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ** ಜಮೀನುಗಳ ಪೋಡಿ ಅಭಿಯಾನವನ್ನು ಜಿಲ್ಲಾಡಳಿತ ಕೈಗೆತ್ತಿಕೊಂಡಿದ್ದು, ಭೂ ಸಮೀಕ್ಷೆಗಾಗಿ ಹೊರ ಜಿಲ್ಲೆಗಳಿಂದ ಪರವಾನಗಿ ಹೊಂದಿರುವ 50 ಜನ ಅನುಭವಿ ಭೂ ಸಮೀಕ್ಷಕರನ್ನು ಕರೆಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>